**3 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ.,ರವರ ನ್ಯಾಯಾಲಯ, ಕಡೂರು**
**ಸಿ.ಸಿ.ನಂ.1138/2025**

ದಿನಾಂಕ: **05.05.2026** ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

| | | |
|---|---|---|
| ಸಾಕ್ಷಿಯ ಹೆಸರು | ಮಲ್ಲಿಕಾರ್ಜುನ | ಚಾಸಾ-3, ಪ್ರಾಸ-2 |
| ತಂದೆಯ ಹೆಸರು | ನೀಲಪ್ಪ | |
| ವಯಸ್ಸು | 39 ವರ್ಷ | |
| ಉದ್ಯೋಗ | ಕೂಲಿ | |
| ವಾಸ | ಹೆಳವರಹಟ್ಟಿ | |

ಮುಖ್ಯ ವಿಚಾರಣೆ: ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ:

ಚಾಸಾ-4 ನನಗೆ ಗೊತ್ತು. ಮೃತ ವ್ಯಕ್ತಿ ನನಗೆ ಗೊತ್ತು ಅವರು ನನ್ನ ಸಂಬಂಧಿ. ಸಾಕ್ಷಿಗೆ ಪೋಲಿಸ್ ನೋಟಿಸನ್ನು ತೋರಿಸಲಾಗಿ ಅದರಲ್ಲಿ ತನ್ನ ಸಹಿ ನೋಡಿ ಗುರುತಿಸಿದ್ದು ಅದನ್ನು ನಿಪಿ-3 ಎಂದು ಸಾಕ್ಷಿ ಸಹಿಯನ್ನು ನಿಪಿ-3(ಎ) ಎಂದು ಗುರುತಿಸಲಾಯಿತು. ದಿ: 23.10.2024 ರ ಸ್ಥಳ ಮಹಜರನ್ನು ತೋರಿಸಲಾಗಿ ಅದರಲ್ಲಿ ತನ್ನ ಸಹಿ ನೋಡಿ ಗುರುತಿಸಿದ್ದು ಅದನ್ನು ನಿಪಿ-4 ಎಂದು ಸಾಕ್ಷಿ ಸಹಿಯನ್ನು ನಿಪಿ-4(ಎ) ಎಂದು ಗುರುತಿಸಲಾಯಿತು. ಸದರಿ ಸಹಿಗಳನ್ನು ಬೀರೂರು ಠಾಣೆಯಲ್ಲಿ ಮಾಡಿರುತ್ತೇನೆ. ಸದರಿ ಸಹಿಗಳನ್ನು ಬೀರೂರು ಠಾಣೆಯಲ್ಲಿ ಮಾಡಿರುತ್ತೇನೆ. ದಿ: 23.10.2024 ರ ಅಮಾನತ್ ಮಹಜರನ್ನು ತೋರಿಸಲಾಗಿ ಅದರಲ್ಲಿ ತನ್ನ ಸಹಿ ನೋಡಿ ಗುರುತಿಸಿದ್ದು ಅದನ್ನು ನಿಪಿ-5 ಎಂದು ಸಾಕ್ಷಿ ಸಹಿಯನ್ನು ನಿಪಿ-5(ಎ) ಎಂದು ಗುರುತಿಸಲಾಯಿತು. ಸದರಿ ಸಹಿಗಳನ್ನು ಅಪಘಾತದ ವಿಚಾರವಾಗಿ ಠಾಣೆಯಲ್ಲಿ ಹಾಕಿರುತ್ತೇನೆ. ಅದರಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿಲ್ಲ. ನನ್ನೊಂದಿಗೆ ಬೇರೆ ಯಾರು ಸಹಿ ಮಾಡಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ಸಾಕ್ಷಿಗೆ ಸ್ಥಳ ಮಹಜರ್ ಸಮಯದಲ್ಲಿ ತೆಗೆಯಲಾದ 4 ಛಾಯಾಚಿತ್ರಗಳನ್ನು ತೋರಿಸಲಾಗಿ ಅದರಲ್ಲಿ ತನ್ನ ಇರುವಿಕೆಯನ್ನು ನೋಡಿ ಗುರುತಿಸಿದ್ದು ಅವುಗಳನ್ನು ನಿಪಿ-6 ರಿಂದ 9 ಎಂದು ಗುರುತಿಸಲಾಯಿತು. ಅಮಾನತ್ ಮಹಜರ್ ಸಮಯದಲ್ಲಿ ತೆಗೆಯಲಾದ 2 ಛಾಯಾಚಿತ್ರಗಳನ್ನು ತೋರಿಸಲಾಗಿ ಅದರಲ್ಲಿ ತನ್ನ ಇರುವಿಕೆಯನ್ನು ನೋಡಿ ಗುರುತಿಸಿದ್ದು ಅವುಗಳನ್ನು ನಿಪಿ-10 ಮತ್ತು 11 ಎಂದು ಗುರುತಿಸಲಾಯಿತು. ಸದರಿ ಛಾಯಾಚಿತ್ರಗಳನ್ನು ಯಾರ ವಿಚಾರವಾಗಿ ತೆಗೆದಿರುತ್ತಾರೆ ಎಂದು ಗೊತ್ತಿಲ್ಲ, ಪೋಲಿಸರ ಕೋರಿಕೆ ಮೇರೆಗೆ ನಿಂತಿರುತ್ತೇನೆ.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೊಜನೆಯ ಪ್ರಕರಣಕ್ಕೆ ಪ್ರತಿಕೂಲವಾಗಿ ಸಾಕ್ಷ್ಯ ನುಡಿದಿರುವುದರಿಂದ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ, ಪಾಟೀ ಸವಾಲನ್ನು ಮಾಡಲು ಮಾನ್ಯ ಸಸಅ ಅವರು ಅನುಮತಿಯನ್ನು ಕೋರಿದ್ದು ಅನುಮತಿ ನೀಡಲಾಯಿತು)**

പാಟೀಸವಾಲು: ಮಾನ್ಯ ಸಸಅ. ರವರಿಂದ :

ದಿ: 30.09.2024 ರಂದು ಆಕಾಶ್ ಹೆಚ್ ರವರಿಗೆ ಅಪಘಾತವಾಗಿದ್ದು ಈ ವಿಚಾರವಾಗಿ ಸ್ಥಳ ಪಂಚನಾಮೆಗೆ ಸಹಕರಿಸುವಂತೆ ನನಗೆ ಮತ್ತು ಚಾಸಾ-4 ರವರಿಗೆ ನಿಪಿ-3 ರಂತೆ ನೋಟಿಸು ನೀಡಿರುತ್ತಾರೆ ಎಂದರೆ ಸರಿ. ದಿ: 23.10.2024 ರಂದು ಚಾಸಾ-12 ರವರ ತೋರಿಸಿದ ಸ್ಥಳದಲ್ಲಿ ನನ್ನ ಮತ್ತು ಚಾಸಾ-4 ರವರ ಸಮಕ್ಷಮ ಮಧ್ಯಾಹ್ನ 12.00 ರಿಂದ 12.30 ರವರೆಗೆ ನಿಪಿ-4 ರಂತೆ ಸ್ಥಳ ಮಹಜರ್ ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ಅದೇ ಸಮಯದಲ್ಲಿ ನಿಪಿ-6 ರಿಂದ 9 ರ ಛಾಯಾಚಿತ್ರಗಳನ್ನು ತೆಗೆಸಿರುತ್ತಾರೆ ಎಂದರೆ ಸರಿಯಲ್ಲ. ಅದೇ ದಿನ ಪೋಲಿಸ್ ಠಾಣೆಗೆ ಹೋಗಿದ್ದು ಚಾಸಾ-9 ರವರು ತೋರಿಸಿದ ಮೇರೆಗೆ ಅಪಘಾತಕ್ಕೊಳಗಾದ ಕೆಎ-18 6532 ರ ಬೈಕನ್ನು ಮುಂದಿನ ಕ್ರಮಕ್ಕಾಗಿ ಮಧ್ಯಾಹ್ನ 12.45 ರಿಂದ 1.15 ರವರೆಗೆ ನಿಪಿ-5 ರ ಮಹಜರ್ ಕ್ರಮದಂತೆ ವಶಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಅದೇ ಸಮಯದಲ್ಲಿ ನಿಪಿ-10 ಮತ್ತು 11 ರ ಛಾಯಾಚಿತ್ರ ತೆಗೆಸಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀಸವಾಲು: ಆರೋಪಿ ಪರ ವಕೀಲರಿಂದ :ಇಲ್ಲ

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೇ ಸ ಇ

Sd/-
3 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ:ದ:ನ್ಯಾ:ದಂ.,ರವರು, ಕಡೂರು.